ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಆಹಾರ ಮತ್ತು ನಾಗರಿಕ ಸರಬರಾಜು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 5/6/2020

# ಅನರ್ಹ ಪಡಿತರ ಚೀಟಿ ರದ್ದು

## ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 05/06/2020

ಬಿಪಿಎಲ್ ಕಾರ್ಡ್ ಹೊಂದಿರುವ ಸರ್ಕಾರಿ ನೌಕರರು, ಇತರೆ ವಾಹನ ಮಾಲೀಕರು ಕಾರ್ಡುಗಳನ್ನು ಕೂಡಲೇ ಹಿಂತಿರುಗಿಸಬೇಕು. ಇಲ್ಲವಾದಲ್ಲಿ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಎಚ್ಚರಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಅರ್ಹ ಫಲಾನುಭವಿಗಳಿಗೆ ಪಡಿತರ ಸೌಲಭ್ಯ ಸಮರ್ಪಕವಾಗಿ ತಲುಪಬೇಕು. ಜತೆಗೆ ಅನರ್ಹರು ಈ ಸೌಲಭ್ಯ ದುರುಪಯೋಗ ಪಡಿಸಿಕೊಳ್ಳದಂತೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಕರೊನಾ ಪ್ರಾರಂಭಕ್ಕೆ ಮೊದಲು 63 ಸಾವಿರ ಪಡಿತರ ಕಾರ್ಡುಗಳನ್ನು ರದ್ದುಪಡಿಸಲಾಗಿತ್ತು. ಈಗ ಮತ್ತೆ ಅನರ್ಹ ಮತ್ತು ನಕಲಿ ಪಡಿತರ ಚೀಟಿಗಳ ರದ್ದುಪಡಿಸಲು ಅಭಿಯಾನ ನಡೆಸುವಂತೆ ಸೂಚಿಸಿದರು.

**ರೈತರಿಗೆ 240 ಕೋಟಿ ರೂ. ಬಿಡುಗಡೆ:** ಆಹಾರ ಮತ್ತು ನಾಗರಿಕ ಸರಬರಾಜು ನಿಗಮಕ್ಕೆ ಬೆಂಬಲ ಬೆಲೆ ಯೋಜನೆಯಡಿ ರೈತರ ಉತ್ಪನ್ನ ಖರೀದಿಸಿ ಬಾಕಿ ಇರುವ ಹಣ ಪಾವತಿಸಲು 240 ಕೋಟಿ ರೂ. ಆವರ್ತ ನಿಧಿಯಿಂದ ಬಿಡುಗಡೆಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಕರೊನಾ ಹಿನ್ನೆಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಪಡಿತರ ವಿತರಣೆ ಮಾಡಲಾಗಿದೆ. ಶೇ.95 ಪಡಿತರ ಚೀಟಿದಾರರು ಪಡಿತರ ಪಡೆದುಕೊಂಡಿದ್ದಾರೆ. ಮುಖ್ಯಮಂತ್ರಿಗಳ ಅನಿಲ ಭಾಗ್ಯ ಯೋಜನೆ ಅಡಿ 98,079 ಫಲಾನುಭವಿಗಳಿಗೆ 3 ಅನಿಲ ಸಿಲಿಂಡರುಗಳನ್ನು ಉಚಿತವಾಗಿ ವಿತರಿಸಲು ಕ್ರಮ ವಹಿಸಲಾಗಿದೆ ಎಂದರು. ಆಹಾರ ಇಲಾಖೆ ಸಚಿವ ಕೆ. ಗೋಪಾಲಯ್ಯ, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ..ಎಂ. ವಿಜಯಭಾಸ್ಕರ್, ಆಹಾರ ಇಲಾಖೆ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ ಪ್ರಸಾದ್ ಮತ್ತು ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.



ವಿಜಯವಾಣಿ ಚಿತ್ರ

## ಗೃಹ ಇಲಾಖೆ ಬಲಪಡಿಸಲು ನೆರವು

**ಬೆಂಗಳೂರು:** ಬದಲಾದ ಸನ್ನಿವೇಶಗಳಲ್ಲಿ ಸಿಇಎನ್ (ಸೈಬರ್ ಕ್ರೈಂ, ಎಕನಾಮಿಕ್ ಅಫೆನ್ಸ್ ಮತ್ತು ನಾರ್ಕೊಟಿಕ್ಸ್) ಠಾಣೆಗಳನ್ನು ಬಲಪಡಿಸಲು ಆದ್ಯತೆ ನೀಡುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸೂಚಿಸಿದ್ದಾರೆ. ಗೃಹ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಿದ ಅವರು, ಅಪರಾಧಗಳನ್ನು ತ್ವರಿತವಾಗಿ ಪತ್ತೆ ಹಚ್ಚುವ ನಿಟ್ಟಿನಲ್ಲಿ ಫಾರೆನ್ಸಿಕ್ ಪ್ರಯೋಗಾಲಯಗಳನ್ನು ಬಲಪಡಿಸಲು ಕ್ರಮ ವಹಿಸಲಾಗುವುದು. ತುರ್ತು ಸ್ಪಂದನೆ ವ್ಯವಸ್ಥೆ ಯೋಜನೆಯಡಿ ವಾಹನ ಖರೀದಿಗೆ ಅನುದಾನ ಒದಗಿಸಲಾಗುವುದು ಎಂದರು. ಗೃಹ ಇಲಾಖೆಯಡಿ ಬರುವ ಎಲ್ಲ ಇಲಾಖೆಗಳ ವಿವಿಧ ಮೂಲ ಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದಂತೆ ವಸ್ತುಸ್ಥಿತಿ ಆಧರಿಸಿ, ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು.

**ಹೋಂಗಾರ್ಡ್‌ಗೆ ನೆರವು:** ಕೆಲಸ ಕಳೆದುಕೊಳ್ಳುವ ಭೀತಿಯಲ್ಲಿರುವ 3 ಸಾವಿರಕ್ಕೂ ಹೆಚ್ಚು ಹೋಂ ಗಾರ್ಡ್‌ಗಳನ್ನು ಸೇವೆಯಲ್ಲಿ ಮುಂದುವರಿಸಿ ವಿವಿಧ ಇಲಾಖೆಗಳಿಗೆ ನಿಯೋಜಿಸಲು ತೀರ್ಮಾನಿಸಲಾಯಿತು. ಗೃಹ ಸಚಿವ ಬಸವರಾಜ ಬೊಮ್ಮಾಯಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಗೃಹ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಪೊಲೀಸ್ ಮಹಾನಿರ್ದೇಶಕ ಪ್ರವೀಣ್ ಸೂದ್ ಮತ್ತು ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.